# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -153 ಜಯನಗರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಜಯನಗರ ವಾರ್ಡ್-153 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:08/08/2022 ಸೋಮವಾರದಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ರವರು.
2. ಶ್ರೀ. ನವೀನ್‌ಕುಮಾರ್ ಕೆ. ಕಾರ್ಯದರ್ಶಿ.
3. ಶ್ರೀ. ಜಿ.ಟಿ. ಬೊಮ್ಮೇಗೌಡ, ಕೆಲಸ ಪರಿವೀಕ್ಷಕರು ವಾರ್ಡ್-153
4. ಶ್ರೀ. ರಾಜು, ಕಂದಾಯ ಪರಿವೀಕ್ಷಕರು ವಾರ್ಡ್-153
5. ಶ್ರೀ. ರವೀಂದ್ರ ಹಿಜೇರಿ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-153.
6. ಶ್ರೀ. ವಿಜಯ್‌ಕುಮಾರ್ ಕೆ.ಆರ್ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-153.
7. ಶ್ರೀ. ಎಂ.ಎ. ಹುಸೇನ್ ಎ.ಎಸ್.ಐ ಮೈಕೋ ಲೇಔಟ್ ಪೊಲೀಸ್ ಠಾಣೆ.
8. ವಾರ್ಡ್ ಸಂಖ್ಯೆ 153ರ ಸ್ಥಳೀಯರಾದ ಶ್ರೀ. ಬಿ.ಎಸ್. ವಾಸುದೇವ್, ಶ್ರೀ. ಶ್ರೀನಿವಾಸಮೂರ್ತಿ ಎಸ್, ಶ್ರೀ. ಆರ್.ಎ. ರಾಧಾಕೃಷ್ಣನ್, ಶ್ರೀ. ಜಿ.ಎಸ್. ಬಾಲಾಜಿ, ಶ್ರೀ. ಜಯಕೃಷ್ಣ, ಶ್ರೀ. ಸಲಾವುದ್ದೀನ್, ಶ್ರೀ.ಅಫ್ರಾನ್, ಶ್ರೀ. ನಜಾಹಟ್, ಶ್ರೀ. ಅನೀಸ್ ಅಹಮದ್, ಶ್ರೀ. ಅಯಾಝ್, ಶ್ರೀ. ನಾಗರಾಜ್ ಕೆ.ಆರ್, ಶ್ರೀ. ಸೋಮಶೇಖರ್ ಕೆ.ಸಿ.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಅರಣ್ಯ ಇಲಾಖೆಯ ಅಧಿಕಾರಿಗಳು.
2. ಪೊಲೀಸ್ ಇನ್ಸ್‌ಪೆಕ್ಟರ್ ಬಸವನಗುಡಿ ಸಂಚಾರ ಪೊಲೀಸ್ ಠಾಣೆ.
3. ಪೊಲೀಸ್ ಇನ್ಸ್‌ಪೆಕ್ಟರ್ ಜಯನಗರ ಸಂಚಾರ ಪೊಲೀಸ್ ಠಾಣೆ.
4. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.
5. ಬೆಸ್ಕಾಂ ಇಲಾಖೆಯ ಅಧಿಕಾರಿಗಳು
6. ಪೊಲೀಸ್ ಇನ್ಸ್‌ಪೆಕ್ಟರ್, ಸಿದ್ದಾಪುರ, ತಿಲಕ್‌ನಗರ ಮತ್ತು ಬಸವನಗುಡಿ ಕಾನೂನು ಸುವ್ಯವಸ್ಥೆ

*********



Scanned with CamScanner

1. ವಾರ್ಡ್‌–153 ರ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:08/08/2022 ಸೋಮವಾರದಂದು ಬೆಳಗ್ಗೆ 11.00 ಗಂಟೆಗೆ ನಿಗಧಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.

2. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ವಾಸುದೇವ್ ರವರು ಮಾತನಾಡಿ 8ನೇ ಅಡ್ಡರಸ್ತೆ, 1ನೇ ಬ್ಲಾಕ್ ಜಯನಗರ, ಪೋಸ್ಟ್ ಆಫೀಸ್ ಹಿಂಭಾಗ, ಕಟ್ಟಡದ ಸಾಮಗ್ರಿಗಳಾದ ಜಲ್ಲಿ, ಮರಳು, ಇತ್ಯಾದಿ ಬಿದ್ದಿದ್ದು, ಇವುಗಳನ್ನು ತೆರವುಗೊಳಿಸುವಂತೆ ಕೋರಿದರು. ಈ ಕುರಿತು ವಾರ್ಡ್ ಅಭಿಯಂತರರು ಮಾತನಾಡಿ ತಾವು ತಿಳಿಸಿರುವಂತೆ ಪರಿಶೀಲಿಸಿ ತೆರವುಗೊಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಕ್ರಮ: ವಾರ್ಡ್ ಅಭಿಯಂತರರು

4. ವಾರ್ಡಿನ ಸ್ಥಳೀಯರಾದ ಶ್ರೀ. ಶ್ರೀನಿವಾಸಮೂರ್ತಿ ರವರು ಮಾತನಾಡಿ ಸ್ಟ್ರೀಟ್ ಲೈಟ್‌ಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಕುರಿತು ರಾತ್ರಿ ವೇಳೆಯಲ್ಲಿ ಪರಿಶೀಲಿಸಿದರೆ ಅವುಗಳ ಸ್ಥಿತಿ ಗತಿಯನ್ನು ತಿಳಿಯುವುದು ಸೂಕ್ತ ಹಾಗೂ ದೂರು ನೀಡಿದ ನಂತರ ಪರಿಹರಿಸುವುದಕ್ಕಿಂತ ಈ ರೀತಿ ಖುದ್ದಾಗಿ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿಕೊಂಡರೆ ಸಾರ್ವಜನಿಕರಿಂದ ಈ ಕುರಿತು ದೂರುಗಳು ಬರುವುದಿಲ್ಲ ಹಾಗೂ ಅನುಕೂಲವಾಗುವುದು ಎಂದು ತಿಳಿಸಿದರು. ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ತಿಂಗಳಿಗೆ ಒಂದು ಬಾರಿ ಯಾವುದಾದರೂ ಒಂದು ದಿನ ರಾತ್ರಿ ವೇಳಯಲ್ಲಿ ಸ್ಟ್ರೀಟ್ ಲೈಟ್‌ಗಳ ಪರಿಸ್ಥಿತಿಯನ್ನು ಪರಿಶೀಲಿಸಲು ವಾರ್ಡ್ ಅಭಿಯಂತರರು, ಸ್ಟ್ರಿಟ್ ಲೈಟ್ ಅಭಿಯಂತರರು ಹಾಗೂ ವಾರ್ಡಿನ ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ಸಾಮೂಹಿಕವಾಗಿ ಕಾರ್ಯನಿರ್ವಹಿಸಲು ಸಭೆಯಲ್ಲಿ ತಿಳಿಸಿದರು

ಕ್ರಮ: ವಾರ್ಡ್ ಅಭಿಯಂತರರು, ಸ್ಟ್ರಿಟ್ ಲೈಟ್ ಅಭಿಯಂತರರು ಹಾಗೂ
ವಾರ್ಡಿನ ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು



Scanned with CamScanner

5. ವಾರ್ಡ್ ಅಭಿಯಂತರರು ಮಾತನಾಡಿ 26ನೇ ಮುಖ್ಯರಸ್ತೆ, ತಿಲಕ್‌ನಗರ ರಸ್ತೆಯಲ್ಲಿ ಟ್ರಾಫಿಕ್ ಸಂಬಂಧ ಕಳೆದ 3–4 ಸಭೆಯಲ್ಲಿ ದೂರುಗಳು ಬರುತ್ತಿದ್ದು, ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಮೈಕ್ ಲೇಔಟ್ ಪೊಲೀಸ್ ಠಾಣೆ ಅಧಿಕಾರಿಯವರಿಗೆ ಕೋರಿದರು. ಈ ಕುರಿತು ಸಭೆಯಲ್ಲಿ ಹಾಜರಿದ್ದ ಪೊಲೀಸ್ ಇನ್ಸ್‌ಪೆಕ್ಟರ್ ರವರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

**ಕ್ರಮ: ಮೈಕೋಲೇಔಟ್ ಪೊಲೀಸ್ ಠಾಣೆ**

6. ವಾರ್ಡಿನ ಸ್ಥಳೀಯರಾದ ಡಾ॥ ರಾಧಾಕೃಷ್ಣ ರವರು ಮಾತನಾಡಿ 7ನೇ ಅಡ್ಡರಸ್ತೆ 1ನೇ ಬ್ಲಾಕ್ ಜಯನಗರ, ಇಲ್ಲಿ ಅನಧಿಕೃತವಾಗಿ ಗುಜರಿ ವಾಹನಗಳನ್ನು ನಿಲ್ಲಿಸಿಕೊಂಡು ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಿದ್ದು, ಸದರಿ ಗುಜರಿ ವಾಹನಗಳನ್ನು ತೆರವುಗೊಳಿಸುವಂತೆ ಕೋರಿದರು. ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ಪೊಲೀಸ್ ರವರೊಂದಿಗೆ ಜಂಟಿ ತಪಾಸಣೆ ಕೈಗೊಂಡು ಗುಜರಿ ವಾಹನಗಳನ್ನು ತೆರವುಗೊಳಿಸುವಂತೆ ಸದರಿ ಗುಜರಿ ವಾಹನದ ಮಾಲೀಕರಿಗೆ ತಿಳಿಹೇಳಿ ಅವುಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊರ್ಳಳುವಂತೆ ಸಭೆಗೆ ತಿಳಿಸಿದರು.

**ಕ್ರಮ : ಪೊಲೀಸ್ ಇನ್ಸ್‌ಪೆಕ್ಟರ್ ಜಯನಗರ ಟ್ರಾಫಿಕ್ & ವಾರ್ಡ್ ಅಭಿಯಂತರರು**

7. ವಾರ್ಡಿನ ಸ್ಥಳೀಯರಾದ ಶ್ರೀ. ಸಲಾವುದ್ದೀನ್ ರವರು ಮಾತನಾಡಿ ಬನ್ನೇರುಘಟ್ಟ ರಸ್ತೆಯಿಂದ ಬಿ.ಹೆಚ್.ಇ.ಎಲ್ ಮುಖ್ಯರಸ್ತೆಯ ಮಾರ್ಗವಾಗಿ ಫ್ಯಾಮಿಲಿ ಮಾರ್ಟ್‌ವರೆಗೆ ಅನಧಿಕೃತವಾಗಿ ವಾಹನಗಳನ್ನು ತಂದು ನಿಲ್ಲಿಸುತ್ತಿದ್ದು, ಇದರಿಂದಾಗಿ ಬಿ.ಹೆಚ್.ಇ.ಎಲ್‌ನ ಒಳಗಡೆ ಇರುವ ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದ್ದು, ಇವುಗಳನ್ನು ತೆರವುಗೊಳಿಸಿದ್ದಲ್ಲಿ ಅಥವಾ ಸದರಿ ರಸ್ತೆಯಲ್ಲಿ ವಾಹನ ನಿಲ್ಲಿಸದಂತೆ ನೋಡಿಕೊಂಡಲ್ಲಿ ಅನುಕೂಲವಾಗುತ್ತದೆ ಎಂದು ಕೋರಿದರು. ಈ ಕುರಿತು ಸಭೆಯಲ್ಲಿ ಹಾಜರಿದ್ದ ಮೈಕೋಲೇಔಟ್ ಪೊಲೀಸ್ ರವರು ಮಾತನಾಡಿ ಈ ಬಗ್ಗೆ ಅನಧಿಕೃತವಾಗಿ ನಿಂತಿರುವ ವಾಹನಗಳನ್ನು ಲಾಕ್ ಮಾಡಿ ದಂಡ ವಿಧಿಸುವ ಕುರಿತು ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅರಿವು ಮೂಡಿಸುವ ಬಗ್ಗೆಯೂ ಸಹ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

**ಕ್ರಮ : ಪೊಲೀಸ್ ಇನ್ಸ್‌ಪೆಕ್ಟರ್ ಮೈಕೊಲೇಔಟ್ ಪೊಲೀಸ್ ಠಾಣೆ**

8. ವಾರ್ಡಿನ ಸ್ಥಳೀಯರಾದ ಶ್ರೀ. ಬಾಲಾಜಿ ರವರು ಮಾತನಾಡಿ 6ನೇ ಅಡ್ಡರಸ್ತೆ, 1ನೇ ಬ್ಲಾಕ್ ಜಯನಗರ, ನಾಮ್‌ದಾರೀಸ್ ಬಳಿ ಹೊಸದಾಗಿ ಡಾಂಬರೀಕರಣ ಮಾಡಿದ ಸಂದರ್ಭದಲ್ಲಿ ರಸ್ತೆ ಸ್ವಚ್ಛಗೊಳಿಸಿದ ಮಣ್ಣನ್ನು ತೆರವುಗೊಳಿಸುವಂತೆ ಕೋರಿದರು. ಈ ಕುರಿತು ವಾರ್ಡ್ ಅಭಿಯಂತರರು ಮಾತನಾಡಿ ಸದರಿ ಮಣ್ಣನ್ನು ತೆರವುಗೊಳಿಸಲಾಗುವುದೆಂದು ತಿಳಿಸಿದರು.

**ಕ್ರಮ : ವಾರ್ಡ್ ಅಭಿಯಂತರರು**



Scanned with CamScanner

9. ಶ್ರೀ. ಜಯಕೃಷ್ಣ ಬಿ.ಹೆಚ್.ಇ.ಎಲ್ ಲೇಔಟ್ ಆಫಿಸರ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಮತ್ತು ಇತರರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ಅನಧಿಕೃತವಾಗಿ ಅಳವಡಿಸಿರುವ ಶೆಡ್‌ಗಳನ್ನು ತೆರವುಗೊಳಿಸುವಂತೆ ಮಾನ್ಯ ನ್ಯಾಯಾಲಯವು ಆದೇಶ ನೀಡಿ ಒಂದು ವರ್ಷ ಕಳೆದರೂ ಸದರಿ ಶೆಡ್‌ಗಳನ್ನು ತೆರವುಗೊಳಿಸಿರುವುದಿಲ್ಲ. ಇದರಿಂದಾಗಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಪ್ರತಿದಿನ ಸಮಸ್ಯೆಯಾಗುತ್ತಿರುತ್ತದೆ ಇವುಗಳನ್ನು ತೆರವುಗೊಳಿಸುವಂತೆ ಅನೇಕ ಬಾರಿ ಮನವಿ ಪತ್ರಗಳನ್ನು ನೀಡಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಆದ್ದರಿಂದ ಆದಷ್ಟೂ ಶೀಘ್ರವಾಗಿ ಅನಧಿಕೃತ ಶೆಡ್‌ಗಳನ್ನು ತೆರವುಗೊಳಿಸುವಂತೆ ಕೋರಿದರು. ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್ ಅಭಿಯಂತರರಿಗೆ ಸಭೆ ಮುಗಿದ ನಂತರ ಹಿರಿಯ ಆರೋಗ್ಯ ಪರಿವೀಕ್ಷಕರು, ಕಂದಾಯ ಪರಿವೀಕ್ಷಕರುಗಳ ಜೊತೆಗೆ ಪ್ರಸ್ತಾಪಿತ ಸ್ಥಳಕ್ಕೆ ತೆರಳಿ, ಸದರಿ ಶೆಡ್‌ಗಳಲ್ಲಿ ವಾಸಿಸುತ್ತಿವವರಿಗೆ ಸದರಿ ಶೆಡ್‌ಗಳನ್ನು ತೆರವುಗೊಳಿಸುವಂತೆ ಸೂಚನೆ ನೀಡಲು ತಿಳಿಸಿದರು. ನಂತರ ಈ ಕುರಿತು ಬಿ.ಹೆಚ್.ಇ.ಎಲ್ ಲೇಔಟ್‌ನ ಅಸೋಸಿಯೇಷನ್ ರವರು ಸಲ್ಲಿಸಿರುವ ಮನವಿ ಪತ್ರಗಳನ್ನು ಅಡಕಗೊಳಿಸಿ ಕಾರ್ಯಪಾಲಕ ಅಭಿಯಂತರರಿಗೆ ಈ ಕುರಿತು ಪತ್ರ ಬರೆಯುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು.

ಕ್ರಮ : ವಾರ್ಡ್ ಅಭಿಯಂತರರು

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

(ನವೀನ್‌ಕುಮಾರ್ ಕೆ.)
ಕಾರ್ಯದರ್ಶಿ
ವಾರ್ಡ್-153 ಜಯನಗರ

(ವರಲಕ್ಷ್ಮಿ ಎಲ್) 8/8/22
ನೋಡಲ್ ಅಧಿಕಾರಿ
ವಾರ್ಡ್-153 ಜಯನಗರ



Scanned with CamScanner